## ಸಮಾಚಾರ ಸಣ್ಣದಲ್ಲ

### ಜೋಕಾಲಿ ಸೀರೆ ಕತ್ತಿಗೆ ಬಿಗಿದು ಬಾಲಕ ಮೃತ್ಯು

**ಚಿಕ್ಕಮಗಳೂರು:** ಜೋಕಾಲಿಗೆ ಕಟ್ಟಿದ ಸೀರೆ ಬಾಲಕನ ಕುತ್ತಿಗೆಗೆ ಬಿಗಿದು ಮೃತಪಟ್ಟ ಪ್ರಕರಣ ಬಾಳೆಹೊನ್ನೂರು ಸಮೀಪದ ಮೇಲಾಲ್ ಸಮೀಪದ ಕರ್ಕೇಶ್ವರ ಕೈಮರದಲ್ಲಿ ನಡೆದಿದೆ. ಕರ್ಕೇಶ್ವರ ಕೈಮರದಲ್ಲಿ ನಡೆದಿದೆ. ಸನ್ಮಯ್ ತನ್ನ ಸಹೋದರನ ಜತೆ ಗೂಡಿ ಜೋಕಾಲಿ ಆಡುತ್ತಿದ್ದ ವೇಳೆ ಮರಕ್ಕೆ ಜೋಕಾಲಿಗಾಗಿ ಕಟ್ಟಿದ ಸೀರೆ ಬಾಲಕ ತನ್ಮಯ್ ಕುತ್ತಿಗೆಗೆ ಬಿಗಿದಿದೆ. ಈ ಪರಿಣಾಮ ಜೋಕಾಲಿ ಆಡುವಾಗಲೇ ಬಾಲಕ ಉಸಿರುಗಟ್ಟಿ ಕೊನೆಯುಸಿರೆಳೆದಿದ್ದಾನೆ. ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಪರಿಶೀಲನೆ ನಡೆಸಿದರು.

### ವಿದ್ಯುತ್ ಹರಿದು ಲೈನ್ ಮ್ಯಾನ್ ಸಾವು

**ಚಿಕ್ಕಮಗಳೂರು:** ಜಿಲ್ಲೆಯ ಬಾಳೆಹೊನ್ನೂರು ಸಮೀಪದ ಸೀಗೋಡು ಕೆಫೆ ಬಳಿ ವಿದ್ಯುತ್ ಪರಿವರ್ತಕವನ್ನು ದುರಸ್ತಿಗೊಳಿಸುತ್ತಿದ್ದ ವೇಳೆ ಆಕಸ್ಮಿಕವಾಗಿ ವಿದ್ಯುತ್ ಪ್ರವಹಿಸಿ, ಹೊಳೆ ನರಸೀಪುರ ಸಮೀಪದ ಚರಣ್ಯ ಗ್ರಾಮದ ಲೈನ್ ಮ್ಯಾನ್ ಮಹದೇವಪ್ಪ(29) ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರು ಒಂದೂವರೆ ವರ್ಷದ ಹಿಂದೆ ಮದುವೆಯಾಗಿದ್ದರು. ಮೃತರ ಅಂತ್ಯಸಂಸ್ಕಾರ ಚರಣ್ಯ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಘಟನೆ ಕುರಿತು ವತರ ತಂದೆ ಸೋಮಶೇಖರ್ ಪೊಲೀಸರಿಗೆ ದೂರು ನೀಡಿದ್ದು, ಠಾಣಾಧಿಕಾರಿ ರವೀಶ್ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.



### ಕಡಬದಲ್ಲಿ 40.7 ಡಿಗ್ರಿ ಸೆ.ಗರಿಷ್ಠ ತಾಪಮಾನ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲೂಕಿನಲ್ಲಿ ಮಂಗಳವಾರ 40.7 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದು, ಇದು ಈ ವರ್ಷ ಬೇಸಿಗೆಯಲ್ಲಿ ದಾಖಲಾದ ಗರಿಷ್ಠ ತಾಪಮಾನವಾಗಿದೆ. ಮಧ್ಯಾಹ್ನ 2.30ರ ವೇಳೆಗೆ ಇಲ್ಲಿ 40.7 ಡಿಗ್ರಿ ಸೆ. ತಾಪಮಾನ ದಾಖಲಾಗಿದ್ದರೂ, 45 ಡಿಗ್ರಿ ತಾಪಮಾನ ಇರುವಷ್ಟು ಧಗೆ ಇತ್ತು ಎಂದು ಹವಾಮಾನ ಇಲಾಖೆ ತಿಳಿಸಿದಲ. ಏ.5ರಂದು ಇದೇ ತಾಲೂಕಿನಲ್ಲಿ 39.9 ಡಿಗ್ರಿ ಸೆ.ಉಷ್ಣತೆ ದಾಖಲಾಗಿತ್ತು. ಮಂಗಳೂರು ನಗರದಲ್ಲಿ ಗರಿಷ್ಠ 36, ಕನಿಷ್ಠ 25 ಡಿಗ್ರಿ ಸೆ. ಉಷ್ಣತೆ ಇತ್ತು. ಜಿಲ್ಲೆ ಯಲ್ಲಿ 2 ದಿನಗಳ ಹಿಂದೆ ಮಳೆಯಾಗಿದ್ದರೂ, ವಾತಾ ವರಣದಲ್ಲಿ ತಂಪು ಮೂಡಿಲ್ಲ. ದಿನದಿಂದ ದಿನಕ್ಕೆ ಧಗೆ ಹೆಚ್ಚುತ್ತಿರುವ ಅನುಭವವಾಗುತ್ತಿದೆ. ಕರಾವಳಿ ಯಲ್ಲಿ ಏ.26ರವರೆಗೆ ಬಿಸಿಗಾಳಿ ಬೀಸುವ ಸಾಧ್ಯತೆ ಇದೆ.

### ಕೈ ಅಭ್ಯರ್ಥಿಯಿಂದ 1 ಲಕ್ಷ ರು.ದೇಣಿಗೆ

**ಕುಷ್ಟಗಿ:** ನೀತಿ ಸಂಹಿತೆ ಜಾರಿಯಲ್ಲಿದ್ದರೂ ಲೋಕಸಭೆ ಚುನಾವಣೆಯಲ್ಲಿನ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ರಾಜಶೇಖರ ಹಿಟ್ನಾಳ ಪಟ್ಟಣದ ದ್ಯಾಮವ್ವ ದೇವಸ್ಥಾನಕ್ಕೆ 1 ಲಕ್ಷ ರು.ನಗದು ಹಣವನ್ನು ದೇಣಿಗೆ ನೀಡಿರುವುದು ಚರ್ಚೆಗೆ ಗ್ರಾಸ ಒದಗಿಸಿದೆ.ಹಣವನ್ನು ದೇವಸ್ಥಾನದ ಸಮಿತಿ ಯವರಿಗೆ ಈಚೆಗೆ ಹಸ್ತಾಂತರಿಸಿರುವುದಕ್ಕೆ ಸಾಕ್ಷ್ಯ ಒದಗಿಸುವಂತೆ ಕಾಂಗ್ರೆಸ್ ಪಕ್ಷದ ಇಲ್ಲಿಯ ಮು ಖಂಡರು ಅದನ್ನು ಏ.24ರಂದು ಫೇಸ್‌ಬುಕ್ ಸೇರಿ ದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿ ಕೊಂಡಿದ್ದಾರೆ. ಚಿತ್ರ ಸಹಿತ ಮಾಹಿತಿ ಹಂಚಿಕೊಂಡಿದ್ದ ಕಾಂ ಗ್ರೆಸ್ ಬೆಂಬಲಿಗರು ಕೆಲ ಗಂಟೆಗಳ ನಂತರ ಅದನ್ನು ತಿದ್ದುಪಡಿ ಮಾಡಿ ರಾಜಶೇಖರ ಹಿಟ್ನಾಳ ಹೆಸರಿನ ಬದಲು ರಾಘವೇಂದ್ರ ಹಿಟ್ನಾಳ ಎಂದು ಬರೆದುಕೊಂಡಿದ್ದಾರೆ.

### ....ವಿಡಿಯೋ ಬಹಿರಂಗ

← ಮೊದಲಪುಟದಿಂದ

ಇವರೆಲ್ಲರನ್ನೂ ಈ ರೀತಿ ಬಗ್ಗಿಸಲು ಆ ಮಹಾನುಭಾವನಿಗೆ ಸಾಧ್ಯವಾಗಿದ್ದು ಹೇಗೆ? ಅಧಿಕಾರದ ಮದದಿಂದ. ಆ ಅಧಿಕಾರ ಮತ್ತು ಆ ಮದ ಎಲ್ಲಿಂದ ಬಂದಿದ್ದು? ರಾಜಕೀಯವಾಗಿ ದೊಡ್ಡ ಕುಟುಂಬವೊಂದು ತನ್ನ ಬೆನ್ನಿಗಿದೆ ಎಂಬ ಮದದಿಂದಲ್ಲವೇ? ಎಂಬ ಪ್ರಶ್ನೆಗಳನ್ನು ಕ್ಷೇತ್ರದ ಜನ ಕೇಳುತ್ತಿದ್ದಾರೆ. ಇದಿಷ್ಟೇ ಅಲ್ಲ, ಆ ವ್ಯಕ್ತಿ ತನ್ನ ತಂದೆಯ ವಯಸ್ಸಿನವರನ್ನೂ ಏಕವಚನದಲ್ಲಿ ಮಾತನಾಡಿಸುತ್ತಾರೆ. ತಮಗೆ ಬೇಕಾದವರನ್ನು ಮಂಚಕ್ಕೆ ಕರೆಯುತ್ತಾರೆ. ಜಾತಿಯ ಹೆಸರಿನಲ್ಲಿ ದೌರ್ಜನ್ಯ ನಡೆಸುತ್ತಾರೆ ಎಂಬಿತ್ಯಾದಿ ಆರೋಪಗಳೂ ಕೇಳಿಬರುತ್ತಿದೆ. ಶುಕ್ರವಾರ ನಡೆಯಲಿರುವ ಲೋಕಸಭೆ ಚುನಾವಣೆ ಮತದಾನದ ವೇಳೆ ಇದೇ ಚರ್ಚೆಯ ಪ್ರಮುಖ ವಸ್ತುವೂ ಆಗಿದೆ.

ಹುಬ್ಬಳ್ಳಿಯ ವಿಆರ್‌ಎಲ್ ಸಂಸ್ಥೆಯಿಂದ ಅಂಧರಿಗಾಗಿ ಸಿದ್ಧಪಡಿಸಿದ ಪುಸ್ತಕ | ಪ್ರಧಾನಿ ಮೋದಿ ಅವರ ಜೀವನ, ನಾಯಕತ್ವದ ಬಗ್ಗೆ ತಿಳಿದುಕೊಳ್ಳಲು ಅನುಕೂಲ

# ಪ್ರಾಮಿಸ್ಡ್ ನೇಷನ್ ಪುಸ್ತಕ ಪ್ರಧಾನಿ ಮೋದಿಗೆ ಅರ್ಪಣೆ

**ಬೆಂಗಳೂರು:** ದೇಶದ 7 ಕೋಟಿ ಅಂಧರು, ದೃಷ್ಟಿದೋಷವಿದ್ದವರು ಪ್ರಧಾನಿ ನರೇಂದ್ರ ಮೋದಿಯವರ ಜೀವನ, ಕಾರ್ಯ ಮತ್ತು ನಾಯಕತ್ವದ ಬಗ್ಗೆ ತಿಳಿದುಕೊಳ್ಳಲು ಅನುಕೂಲವಾಗಲಿ ಎಂಬ ಉದ್ದೇಶದಿಂದ ಹುಬ್ಬಳ್ಳಿ ಮೂಲದ ಟೀಮ್ ಸೆನ್ಸ್ ಎಸೆನ್ಸ್ ಸಂಸ್ಥೆಯು ಬ್ರೈಲ್ ಲಿಪಿಯಲ್ಲಿ ಸಿದ್ಧಪಡಿಸಿದ 'ಎ ಪ್ರಾಮಿಸ್ಡ್ ನೇಷನ್ ಹಾನರೇಬಲ್ ನರೇಂದ್ರ ಮೋದಿ- ದ ಮೇಕರ್ ಆಫ್ ನ್ಯೂ ಇಂಡಿಯಾ' ಎಂಬ ಪುಸ್ತಕವನ್ನು ಇತ್ತೀಚೆಗೆ ಪ್ರಧಾನಿಯವರಿಗೆ ಅರ್ಪಿಸಲಾಯಿತು.

ಸೆನ್ಸ್ ಎಸೆನ್ಸ್ ಸಂಸ್ಥೆಯ ರುಷಾಲಿ ಭಂಡಾರಿ ಮತ್ತು ಯಶ್ವಿ ಭಂಡಾರಿ ಅವರು ಕಾಳಜಿಯಿಂದ ಸಿದ್ಧಪಡಿಸಿದ ಈ ವಿಶೇಷ ಪುಸ್ತಕವನ್ನು ವಿಆರ್‌ಎಲ್ ಸಮೂಹ ಸಂಸ್ಥೆಯ ಸಹಯೋಗ ಮತ್ತು ಪ್ರಾಯೋಜಕತ್ವದಲ್ಲಿ ಹೊರತರಲಾಗಿದೆ. ದೇಶದ ಎರಡೂವರೆ ಲಕ್ಷ ಅಂಧ ಮಕ್ಕಳು ಹಾಗೂ ಕಣ್ಣಿನ ಸಮಸ್ಯೆ ಎದುರಿಸುತ್ತಿರುವ 7 ಕೋಟಿ ಜನರು ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಈ ಪುಸ್ತಕದಿಂದ ಸಾಕಷ್ಟು ಮಾಹಿತಿ ಪಡೆದುಕೊಳ್ಳಬಹುದು. ಬೆಂಗಳೂರಿಗೆ ಆಗಮಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದ ವಿಆರ್‌ಎಲ್ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಆನಂದ ಸಂಕೇಶ್ವರ, ವಾಣಿ ಆನಂದ ಸಂಕೇಶ್ವರ, ರುಷಾಲಿ, ಯಶ್ವಿ ಅವರು ಪುಸ್ತಕದ 5 ಪ್ರತಿಗಳನ್ನು ಅರ್ಪಿಸಿದರು.



ಪ್ರಧಾನಿ ನರೇಂದ್ರ ಮೋದಿ ಅವರಿಗೆ 'ಎ ಪ್ರಾಮಿಸ್ಡ್ ನೇಷನ್ ಹಾನರೇಬಲ್ ನರೇಂದ್ರ ಮೋದಿ- ದ ಮೇಕರ್ ಆಫ್ ನ್ಯೂ ಇಂಡಿಯಾ' ಬ್ರೈಲ್ ಲಿಪಿಯಲ್ಲಿ ಸಿದ್ಧಪಡಿಸಿದ ಪುಸ್ತಕವನ್ನು ವಿಆರ್‌ಎಲ್ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಆನಂದ ಸಂಕೇಶ್ವರ, ವಾಣಿ ಆನಂದ ಸಂಕೇಶ್ವರಸೆನ್ಸ್ ಎಸೆನ್ಸ್ ಸಂಸ್ಥೆಯ ರುಷಾಲಿ ಭಂಡಾರಿ ಮತ್ತು ಯಶ್ವಿ ಭಂಡಾರಿ ಅವರು ಸಲ್ಲಿಸಿದರು.

ಪುಸ್ತಕದ ಮುಖಪುಟ ವೀಕ್ಷಿಸಿ, ಒಳಪುಟಗಳನ್ನು ತಿರುವಿ ಹಾಕುತ್ತ ಅತ್ಯಂತ ಆಸಕ್ತಿಯಿಂದ ವಿವರಗಳನ್ನು ಕೇಳಿ ತಿಳಿದುಕೊಂಡ ಪ್ರಧಾನಿ ಮೋದಿಯವರು, ಇದೊಂದು ವಿಶಿಷ್ಟ ಕೃತಿಯಾಗಿದೆ. ನಿಜಕ್ಕೂ ವಿಶೇಷ ಸಾಧನೆ ಮಾಡಿದ್ದೀರಿ ಎಂದು ಪ್ರಶಂಸಿಸಿದರು.

ವಿಆರ್‌ಎಲ್ ಸಮೂಹ ಸಂಸ್ಥೆಯ ಬೆಂಬಲದಿಂದ ಪುಸ್ತಕ ಹೊರತರಲು ಸಾಧ್ಯವಾಯಿತು. ಇದನ್ನು ಅಂಧರ ಶಾಲೆಗಳಿಗೆ ತಲುಪಿಸಲಾಗಿದೆ. ಆಸಕ್ತ ಅಂಧರಿಗೆ ಲಭಿಸುವಂತೆ ಮಾಡಲಾಗಿದೆ. ನಮ್ಮ ದೇಶ ಮಾತ್ರವಲ್ಲ, ಅನ್ಯ ದೇಶಗಳ ಅಂಧರೂ ನಮ್ಮ ಪ್ರಧಾನಿಯವರ ಸಾಧನೆಗಳನ್ನು ತಿಳಿದುಕೊಳ್ಳಲು ಸಹಾಯ ಮಾಡುವ ಆಸೆಯಿದ್ದು, ವಿವಿಧ ದೇಶಗಳಿಗೆ ಪುಸ್ತಕವನ್ನು ತಲುಪಿಸುವ ಗುರಿ ಹೊಂದಿದ್ದೇವೆ ಎಂದು ರುಷಾಲಿ ಮತ್ತು ಯಶ್ವಿ ವಿವರಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪ್ರಧಾನಿ ಮೋದಿ, ನಿಮ್ಮ ಗುರಿ ಒಳ್ಳೆಯದು ಹಾಗೂ ವಿಶಾಲವಾಗಿದೆ. ವಿಆರ್ ಎಲ್ ಸಮೂಹ ಸಂಸ್ಥೆ ಇಂತಹ ಒಳ್ಳೆಯ ಪ್ರಯತ್ನವನ್ನು ಬೆಂಬಲಿಸಿ ಯಶಸ್ವಿಗೊಳಿಸಿರುವುದು ಅಭಿನಂದನಾರ್ಹ ಎಂದು ಹೇಳಿದರು.

ಡಾ.ಆನಂದ ಸಂಕೇಶ್ವರ ಅವರ ಕಾಳಜಿಯನ್ನು ಇದೇ ವೇಳೆ ಪ್ರಶಂಸಿಸಿದರು.

ಪ್ರಧಾನಿ ನರೇಂದ್ರ ಮೋದಿಯವರ ಸಾಧನೆ ಕುರಿತ ಈ ಪುಸ್ತಕವನ್ನು ಕೇಂದ್ರ ಗೃಹಮಂತ್ರಿ ಅಮಿತ್ ಷಾ ಅವರು ಕಳೆದ ಜನವರಿಯಲ್ಲಿ ದೆಹಲಿಯಲ್ಲಿ ಬಿಡುಗಡೆ ಮಾಡಿದ್ದರು.

> ವಿಆರ್‌ಎಲ್ ಲಾಜಿಸ್ಟಿಕ್ ಲಿ. ವತಿಯಿಂದ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಅಡಿಯಲ್ಲಿ ನಾವು ಆರೋಗ್ಯ, ಶಿಕ್ಷಣ, ಕ್ರೀಡಾ ಕ್ಷೇತ್ರಗಳಲ್ಲಿ ಹಲವು ಜನರ ಜೀವನದಲ್ಲಿ ಅರ್ಥಪೂರ್ಣ ಬದಲಾವ ಣೆಗೆ ಪ್ರಯತ್ನಿಸಿದ್ದೇವೆ. ಸಮಾಜದ ಏಳಿಗೆಗೆ ಪೂರಕವಾಗಿ ನಮ್ಮ ಪ್ರಯತ್ನಗಳನ್ನು ಮುಂದು ವರಿಸುತ್ತಲೇ ಇರುತ್ತೇವೆ. ಪ್ರಧಾನಿ ಅವರ ಜೀವನ ಸಾಧನೆ ಮತ್ತು ಅವರ ಕೈಂಕರ್ಯಗಳು ಅಂಧರಿಗೂ ಪ್ರೇರಣೆ ಆಗಲಿ ಎನ್ನುವ ಸದುದ್ದೇಶದಿಂದ ಈ ಪುಸ್ತಕ ಪ್ರಕಟಿಸಲು ನೆರವಾಗಿದ್ದೇವೆ.
>
> **- ಡಾ.ಆನಂದ ಸಂಕೇಶ್ವರ, ವ್ಯವಸ್ಥಾಪಕ ನಿರ್ದೇಶಕರು, ವಿಆರ್‌ಎಲ್ ಸಮೂಹ ಸಂಸ್ಥೆ**

#### ಉಷಾ ಕೃಷ್ಣಗೆ ಪುಸ್ತಕ ಕೊಡುಗೆ

ಜೀವನದಲ್ಲಿ ಒಮ್ಮೆಯಾದರೂ ಪ್ರಧಾನಿ ಮೋದಿ ಅವರನ್ನು ನೋಡಲೇಬೇಕೆಂದು ಹಂಬಲಿಸುತ್ತಿದ್ದ ಬೆಂಗಳೂರಿನ ಉಷಾ ಕೃಷ್ಣ ಅವರ ಕನಸು ಈಡೇರಿತು. ಶೇ. 99ರಷ್ಟು ದೃಷ್ಟಿದೋಷ ಇರುವ ಉಷಾ ಅವರೊಂದಿಗೆ ಮಾತನಾಡುತ್ತಲೇ ವಿಮಾನದಿಂದ ಎ ಪ್ರಾಮಿಸ್ಡ್ ನೇಷನ್ ಬ್ರೈಲ್ ಪುಸ್ತಕವನ್ನು ತರಿಸಿ ಹಸ್ತಾಂತರಿಸಿ, ವಿಆರ್‌ಎಲ್ ಸಂಸ್ಥೆಯ ಶ್ರಮ ತಮಗೆ ಸಹಾಯವಾಗಲಿ ಎಂದು ಶುಭ ಹಾರೈಸಿದ್ದಾರೆ.

ಅತಿ ಸೂಕ್ಷ್ಮ, ಸೂಕ್ಷ್ಮ ಪ್ರದೇಶದಲ್ಲಿ ಅರೆಸೇನೆ ಬಳಸಿಕೊಳ್ಳಲು ನಿರ್ಧಾರ | 14 ಲೋಕಸಭಾ ವ್ಯಾಪ್ತಿಯಲ್ಲಿ 30 ಸಾವಿರ ಮತಗಟ್ಟೆ ಸ್ಥಾಪನೆ: ಮೀನಾ

# ಮೊದಲ ಹಂತದ ಚುನಾವಣೆಗೆ ಸಜ್ಜು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕರ್ನಾಟಕದಲ್ಲಿ ಲೋಕಸಭಾ ಚುನಾವಣಾ ಮತದಾನಕ್ಕೆ ಇನ್ನೊಂದೇ ದಿನ ಬಾಕಿ ಉಳಿದಿದ್ದು, ರಾಜಕೀಯ ಪಕ್ಷಗಳು ಮನೆಮನೆ ಪ್ರಚಾರದಲ್ಲಿ ತಲ್ಲೀನರಾಗಿದ್ದರೆ, ಇತ್ತ ಯಾವುದೇ ಅಹಿತಕರ ಘಟನೆ ನಡೆಯದೇ, ಶಾಂತಿಯುತ ಮತದಾನಕ್ಕಾಗಿ ಚುನಾವಣಾ ಆಯೋಗ ಸಕಲ ಸಿದ್ಧತೆ ನಡೆಸಿಕೊಂಡಿದೆ.

ದೇಶಾದ್ಯಂತ ನಡೆದಿದ್ದ ಮೊದಲ ಹಂತದ ಮತದಾನದಲ್ಲಿ ಕೆಲವೊಂದಷ್ಟು ಭಾಗದಲ್ಲಿ ಗಲಾಟೆಯಾಗಿರುವುದನು ಗಮನದಲ್ಲಿರಿಸಿಕೊಂಡು, ಈ ಬಾರಿ ಚುನಾವಣಾ ಆಯೋಗ ಭಾರಿ ಬಿಗಿ ಭದ್ರತೆಗೆ ಮುಂದಾಗಿದೆ. ಕರ್ನಾಟಕದಲ್ಲಿ 14 ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದ್ದು, 30 ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಿರುವ ಚುನಾವಣಾ ಆಯೋಗ, ಅತಿಸೂಕ್ಷ್ಮ ಮತಗಟ್ಟೆಗಳಲ್ಲಿ ಪೊಲೀಸ್ ಸರ್ಪಗಾವಲು ಹಾಕಿದೆ.

ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಮುಖ್ಯಚುನಾವಣಾಧಿಕಾರಿ ಮನೋಜ್‌ಕುಮಾರ್ ಮೀನಾ, ಶುಕ್ರವಾರ ನಡೆಯಲಿರುವ ಮೊದಲ ಹಂತದ ಮತದಾನಕ್ಕೆ, ಚುನಾವಣಾ ಆಯೋಗ ಅಂತಿಮ ತಯಾರಿ ಪೂರ್ಣಗೊಳಿಸಿದೆ. ಈ ಬಾರಿ ರಾಜ್ಯದಲ್ಲಿ 1,832 ವಿಶೇಷ ಮತಗಟ್ಟೆಗಳ ಸ್ಥಾಪನೆ ಗಮನ ಸೆಳೆದಿದೆ ಎಂದು ವಿವರಿಸಿದರು. ಏ.26ರಂದು ನಡೆಯಲಿರುವ ಮತದಾನ ಹಿನ್ನಲೆಯಲ್ಲಿ ಅಂತಿಮ ಪೂರ್ವ ತಯಾರಿ ಹಾಗೂ ಮೇ.7ರಂದು ನಡೆಯಲಿರುವ ಎರಡನೇ ಹಂತದ ಮತದಾನದ ಅಂತಿಮ ಅಭ್ಯರ್ಥಿಗಳು ಮತ್ತು ರಾಜ್ಯದ ಮತದಾರರ ಪಟ್ಟಿ ಬಿಡುಗಡೆ ಮಾಡಲಾಗಿದೆ. ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ 1,832 ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಮಹಿಳಾ ಮತದಾರರನ್ನು ಉತ್ತೇಜಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಐದರಂತೆ ಒಟ್ಟು 1,120 ಸಖಿ ಮತಗಟ್ಟೆ ಸ್ಥಾಪಿಸಲಾಗಿದೆ. ಇದೇ ರೀತಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದು 'ಅಂಗವಿಕಲರ ವಿಶೇಷ ಮತಗಟ್ಟೆ' ಸ್ಥಾಪಿಸಿದ್ದು, ಅಲ್ಲಿಗೆ ಅಂಗವಿಕಲ ಅಧಿಕಾರಿಗಳು ಮತ್ತು ಸಿಬ್ಬಂದಿ ನಿಯೋಜಿಸಲಾಗುತ್ತದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದು ಯುವ ಮತಗಟ್ಟೆ ತೆರೆದು ಅಲ್ಲಿಗೆ ಯುವ ಅಧಿಕಾರಿಗಳು, ಸಿಬ್ಬಂದಿ ನಿಯೋಜಿಸಲಾಗುವುದು ಎಂದು ಹೇಳಿದರು.

**40 ವಿಶೇಷ ಮತಗಟ್ಟೆ:** ಎಲ್ಲ ಮತದಾರರಲ್ಲಿ ಚುನಾವಣೆ ಮತ್ತು ಮತದಾನದ ಕುರಿತು ಅರಿವು ಮೂಡಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದು ಧ್ಯೇಯ ಆಧಾರಿತ ಮತಗಟ್ಟೆ ವ್ಯವಸ್ಥೆ ಮಾಡಲಾಗಿದೆ.

**ಶೂನ್ಯ ಅವಧಿ:** ಮತದಾನ ಮುಕ್ತಾಯವಾಗುವ 48 ಗಂಟೆಗಳ ಮುನ್ನ ಶೂನ್ಯ ಅವಧಿ ಘೋಷಣೆಯಾಗಿದ್ದು, ಬುಧವಾರ ಸಂಜೆ 6 ಗಂಟೆಯಿಂದ ಯಾವುದೇ ರೀತಿಯ ಸಾರ್ವಜನಿಕ ಸಭೆ, ರ‍್ಯಾಲಿ ನಡೆಸುವಂತಿಲ್ಲ. ಸಂಜೆ 6 ಗಂಟೆಯಿಂದ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ.

#### ರಜೆ ಘೋಷಣೆ

ಮತದಾನ ನಡೆಯುವ ದಿನದಂದು ಎಲ್ಲಾ ಸರಕಾರಿ ಕಚೇರಿಗಳಿಗೆ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು, ಕಾರ್ಖಾನೆಗಳಿಗೂ ಸಾರ್ವತ್ರಿಕ ರಜೆ ನೀಡಲಾಗಿದೆ. ವ್ಯಾಪಾರೋದ್ಯಮ, ಕೈಗಾರಿಕೋದ್ಯಮ, ವಾಣಿಜ್ಯ ಸಂಸ್ಥೆಗಳು ಸೇರಿದಂತೆ ಎಲ್ಲಾ ರೀತಿಯ ಸಂಸ್ಥೆಗಳಲ್ಲಿ ವೇತನ ಸಹಿತ ರಜೆ ನೀಡಲು ಸೂಚಿಸಲಾಗಿದೆ. ಗುರುವಾ ಹಾಗೂ ಶುಕ್ರವಾರದಂದು ಪೂರ್ವ ಪ್ರಮಾಣೀಕರಿಸಿದ ಜಾಹೀರಾತುಗಳನ್ನು ಮಾತ್ರ ಪತ್ರಿಕೆಗಳು ಪ್ರಕಟಿಸಬೇಕು. ಮತಗಟ್ಟೆಗಳ ಬಳಿ 200 ಮೀಟರ್ ದೂರದಲ್ಲಿ ರಾಜಕೀಯ ಪಕ್ಷಗಳ ಒಂದು ಟೇಬಲ್, ಎರಡು ಖುರ್ಚಿಗಳನ್ನು ಹಾಕಿಕೊಳ್ಳಲು ಅವಕಾಶ ನೀಡಲಾಗಿದೆ.

#### ಎಲ್ಲೆಲ್ಲಿ ನಡೆಯಲಿದೆ?

ಮೊದಲ ಹಂತದ ಚುನಾವಣೆ ನಡೆಯುವ ಉಡುಪಿ-ಚಿಕ್ಕಮಗಳೂರು, ಹಾಸನ, ದಕ್ಷಿಣಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಕ್ಷೇತ್ರಗಳಲ್ಲಿ ಒಟ್ಟು 30,602 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. 2,88,19,342 ಮತದಾರರು ಇದ್ದಾರೆ.



> ಯಾವುದೇ ರೀತಿಯ ಸರ್ವೆ, ಸಮೀಕ್ಷೆ, ಅಭಿಪ್ರಾಯ ಸಂಗ್ರಹವನ್ನು ಜೂ.1ರ ಕೊನೆಯ ಹಂತದ ಮತದಾನ ಮುಕ್ತಾಯವಾಗುವವರೆಗೂ ನಿರ್ಬಂಧಿಸಲಾಗಿದೆ. 6 ಗಂಟೆಯ ನಂತರ ಐದು ಜನ ಮೀರದಂತೆ, ಧ್ವನಿ ವರ್ಧಕ ಬಳಸದೆ ಮತಯಾಚನೆ ಮಾಡಬಹುದು ಎಂದರು. ಸಾಮಾನ್ಯ ಜನರು, ಯಾತ್ರಾರ್ಥಿಗಳು, ಪ್ರವಾಸಿಗರಿಗೆ ಕ್ಷೇತ್ರ ಬಿಟ್ಟು ತೆರಳುವ ನಿರ್ಬಂಧವಿಲ್ಲ.
>
> **-ಮನೋಜ್‌ಕುಮಾರ್ ಮೀನಾ, ರಾಜ್ಯ ಮುಖ್ಯಚುನಾವಣಾಧಿಕಾರಿ**

# ಅತಿಸೂಕ್ಷ್ಮ ಲೋಕಸಭಾ ಕ್ಷೇತ್ರ ಬೆಂ.ಗ್ರಾಮಾಂತರಕ್ಕೆ ಬಿಗಿ ಭದ್ರತೆ

ಕ್ಷೇತ್ರಕ್ಕೆ ಅರಸೇನಾ ಪಡೆ ಭದ್ರತೆ | ಮತದಾನ ಪ್ರಕ್ರಿಯೆ ವೀಕ್ಷಣೆಗೆ ವೆಬ್ ಕಾಸ್ಟಿಂಗ್ ಕಣ್ಗಾವಲು

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕುಟುಂಬದ ಪ್ರತಿಷ್ಠೆಯ ಕ್ಷೇತ್ರವಾಗಿರುವ ಬೆಂಗಳೂರು ಗ್ರಾಮಾಂತರವನ್ನು 'ಅತಿಸೂಕ್ಷ್ಮ' ಲೋಕಸಭಾ ಕ್ಷೇತ್ರ ಎಂದು ಪ್ರಕಟಿಸಲಾಗಿದೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ 2,829 ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಮಾಡಲಾಗುತ್ತಿದ್ದು, ಇತರೆ ಕ್ಷೇತ್ರಗಳಿಗಿಂತ ಎರಡು ಪಟ್ಟು ಭದ್ರತಾ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಕೇಂದ್ರ ಅರೆಸೇನಾ ಪಡೆಯ ಏಳು ಕಂಪನಿಗಳು ಮತ್ತು ರಾಜ್ಯ ಪೊಲೀಸರನ್ನು ಭದ್ರತೆಗೆ ಬಳಸಿಕೊಳ್ಳಲಾಗುತ್ತಿದೆ. ಚುನಾವಣೆಯಲ್ಲಿ ದೇವೇಗೌಡರ ಅಳಿಯ ಡಾ.ಸಿ.ಎನ್. ಮಂಜುನಾಥ್ ಸ್ಪರ್ಧಿಸಿದ ದಿನದಿಂದಲೂ ಈ ಕ್ಷೇತ್ರ ಪ್ರತಿಷ್ಠೆಯ ಕ್ಷೇತ್ರವಾಗಿ ಕಾಣಿಸಿಕೊಂಡಿತ್ತು. ಇದಕ್ಕೆ ಪೂರಕವಾಗಿ, ಡಿ.ಕೆ.ಶಿವಕುಮಾರ್, ಕುಮಾರಸ್ವಾಮಿ ಹಾಗೂ ದೇವೇಗೌಡರ ನಡುವೆ ಪದೇಪದೆ ಮಾತಿನ ಸಮರವೂ ಕಳೆದೊಂದು ವಾರದಿಂದ ನಡೆಯುತ್ತಿದೆ. ಕಾರ್ಯಕರ್ತರ ಹಂತದಲ್ಲೂ ತೀವ್ರ ಜಿದ್ದಾಜಿದ್ದಿ ಇದೆ. ಆದ್ದರಿಂದ ಈ ಕ್ಷೇತ್ರವನ್ನು ಅತಿಸೂಕ್ಷ್ಮ ಕ್ಷೇತ್ರವೆಂದು ಘೋಷಿಸಲು ಎರಡೂ ಪಕ್ಷಗಳ ನಾಯಕರು ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಿದ್ದರು. ಕೇಂದ್ರದ ಅರೆಸೇನಾ ಪಡೆಯ ಏಳು ಕಂಪನಿಗಳು ಹಾಗೂ ರಾಜ್ಯದ ಇತರೆ ಪೊಲೀಸ್ ಸಿಬ್ಬಂದಿಗಳನ್ನು ಭದ್ರತೆಗೆ ಬಳಸಿಕೊಳ್ಳಲಾಗಿದೆ. ಅಭ್ಯರ್ಥಿಗಳ ಕೋರಿಕೆ ಹಾಗೂ ಪೊಲೀಸ್, ವೀಕ್ಷಕರು ಮತ್ತು ಕ್ಷೇತ್ರದಲ್ಲಿನ ವಾತಾವರಣವನ್ನು ಗಮನಿಸಿ ಭದ್ರತೆ ಒದಗಿಸಲಾಗುತ್ತದೆ ಎಂದು ಹೇಳಿದರು.



> ಮೊದಲ ಹಂತದಲ್ಲಿ ನಡೆಯಲಿರುವ 14 ಲೋಕಸಭಾ ಕ್ಷೇತ್ರಗಳಲ್ಲಿ ಬೆಂಗಳೂರು ಗ್ರಾಮಾಂತರವೂ ಒಂದಾಗಿದ್ದು, ಏ.26ರಂದು ಮತದಾನ ನಡೆಯಲಿದೆ. ಅತಿಸೂಕ್ಷ್ಮವೆಂದು ಪರಿಗಣಿಸಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಮತದಾನದಂದು ಎಲ್ಲ ಮತಗಟ್ಟೆಗಳಲ್ಲೂ ವೆಬ್ ಕಾಸ್ಟಿಂಗ್ ಮಾಡಲಾಗುತ್ತದೆ
>
> **-ಮನೋಜ್ ಕುಮಾರ್ ಮೀನಾ ರಾಜ್ಯ ಮುಖ್ಯ ಚುನಾವಣಾಧಿಕಾರಿ**

ಶಿವಾನಂದ ಪಾಟೀಲ್‌ಗೆ ಬೊಮ್ಮಾಯಿ ತಿರುಗೇಟು

# ನೇಹಾ ಹತ್ಯೆ: ಸರಕಾರದಿಂದ ತುಷ್ಟೀಕರಣದ ರಾಜಕಾರಣ

**ಗದಗ:** ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಪ್ರಕರಣವನ್ನು ರಾಜ್ಯ ಸರಕಾರ ತುಷ್ಟೀಕರಣ ರಾಜಕಾರಣದ ಚಶ್ಮಾ ಹಾಕಿಕೊಂಡು ನೋಡುತ್ತಿದೆ ಎಂದು ಹಾವೇರಿ ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಟೀಕಿಸಿದರು.

ನೇಹಾ ಹತ್ಯೆ ಆಕಸ್ಮಿಕ ಎಂದು ಹೇಳಿಕೆ ನೀಡಿದ್ದ ಸಚಿವ ಶಿವಾನಂದ ಪಾಟೀಲ ಹೇಳಿಕೆಗೆ ಬುಧವಾರ ನಗರದಲ್ಲಿ ಪ್ರತಿಕ್ರಿಯಿಸಿದ ಅವರು, ಶಿವಾನಂದ ಪಾಟೀಲ ಹೇಳಿಕೆ ಕಾಂಗ್ರೆಸ್‌ನ ಮನಃಸ್ಥಿತಿಯನ್ನು ತೋರಿಸುತ್ತದೆ. ನೇಹಾಳನ್ನು ಹತ್ಯೆ ಮಾಡಿದ ಯುವಕ ಅಲ್ಪಸಂಖ್ಯಾತನಿದ್ದಾನೆ. ಹತ್ಯೆ ಪ್ರಕರಣವನ್ನು ಗೌಣ ಮಾಡುವುದಕ್ಕಾಗಿ ಈ ರೀತಿಯ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಶಿವಾನಂದ ಪಾಟೀಲ್ ಯಾವಾಗಲೂ ಹೀಗೆ ಮಾತನಾಡುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಇಂಥವರೇ ಬೇಕಾಗಿದ್ದಾರೆ ಎಂದು ಹರಿಹಾಯ್ದರು. ಧರ್ಮ ಆಧಾರಿತ ಮೀಸಲಾತಿಗೆ ಅವಕಾಶ ಇಲ್ಲ ಎಂದು ಸಂವಿಧಾನದಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ಹೀಗಿದ್ದರೂ ಕಾಂಗ್ರೆಸ್ ತುಷ್ಟೀಕರಣದ ರಾಜಕಾರಣಕ್ಕೆ ಮುಸ್ಲಿಮರ ಮೀಸಲಾತಿಗೆ ಬೆಂಬಲ ಕೊಡುತ್ತಿದೆ ಎಂದು ದೂರಿದರು. ಮುಸ್ಲಿಂ ಸಮುದಾಯದಲ್ಲೂ ನದಾಫ, ಪಿಂಜಾರ ಸೇರಿದಂತೆ 24 ಜಾತಿಯವರು ಬಹಳ ಹಿಂದುಳಿದವರಿದ್ದಾರೆ. ಅವುಗಳಿಗೆ ಈಗಾಗಲೇ 2ಎ ಯಲ್ಲಿ ಮೀಸಲಾತಿ ಇದೆ. ಅವರಿಗೆ ಹೆಚ್ಚುವರಿಯಾಗಿ ಶೇ 4 ಮೀಸಲಾತಿ ಕೊಟ್ಟಿದ್ದರು. ಅದನ್ನೇ ಹಿಂದುಳಿದ ವರ್ಗಗಳ ಆಯೋಗ ಆಕ್ಷೇಪ ಮಾಡಿದೆ. ಈಗ ಆ ಪ್ರಕರಣ ಸುಪ್ರೀಂ ಕೋರ್ಟಿನಲ್ಲಿದೆ ಎಂದು ತಿಳಿಸಿದರು.

**ಗೊಂದಲ ಸೃಷ್ಟಿಸುವ ಕೆಲಸ ಮಾಡಬಾರದು:** ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಆಸ್ತಿ ಮರು ಹಂಚಿಕೆ ಮಾಡಲಿದೆ ಎಂಬ ಹೇಳಿಕೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ ಅವರು, ಈ ಮಾತು ಕೇಳುವುದಕ್ಕೆ ಬಹಳ ಚೆನ್ನಾಗಿ ಅನಿಸುತ್ತದೆ. ಆದರೆ, ಯಾರದ್ದು ಕಿತ್ತುಕೊಂಡು ಯಾರಿಗೆ ಕೊಡುತ್ತಾರೆ? ಏನು ಸರ್ವೆ ಮಾಡುತ್ತಾರೆ? ಚುನಾವಣೆ ಸಂದರ್ಭದಲ್ಲಿ ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಕೆಲಸ ಮಾಡಬಾರದು. ಜವಾಬ್ದಾರಿ ಸ್ಥಾನದಲ್ಲಿ ಇದ್ದವರು ಹೀಗೆ ಮಾತನಾಡಬಾರದು ಎಂದು ಹೇಳಿದರು.

ವಿದ್ಯಾರ್ಥಿನಿ ನೇಹಾ ಕೊಲೆ ಪ್ರಕರಣ | ಆರು ದಿನ ಸಿಐಡಿ ಕಸ್ಟಡಿಗೆ ಆರೋಪಿ ಫಯಾಜ್

# ಸಿಐಡಿ ಅಧಿಕಾರಿಗಳಿಂದ ಕೃತ್ಯದ ಸ್ಥಳ ಮಹಜರು

**ಹುಬ್ಬಳ್ಳಿ:** ಸಿಐಡಿ ಅಧಿಕಾರಿಗಳು ವಿದ್ಯಾರ್ಥಿನಿ ನೇಹಾ ಕೊಲೆ ಪ್ರಕರಣದ ಆರೋಪಿ ಫಯಾಜ್‌ನನ್ನು ಧಾರವಾಡ ಕೇಂದ್ರ ಕಾರಾಗೃಹದಿಂದ ವಶಕ್ಕೆ ಪಡೆದು ಕೃತ್ಯ ನಡೆದ ಸ್ಥಳ ಬಿವಿಬಿ ಕಾಲೇಜು ಆವರಣಕ್ಕೆ ಕರೆತಂದು ಬುಧವಾರ ಮಹಜರು ನಡೆಸಿದರು.

ಎಸ್ಪಿ ವೆಂಕಟೇಶ್ ಹಾಗೂ ಡಿವೈಎಸ್ಪಿ ಮನೋಹರ ಪೈಕ್ ನೇತೃತ್ವದ ಎಂಟು ಮಂದಿಯ ತಂಡ ಪರಿಶೀಲನೆ ನಡೆಸಿತು. ಸಿಐಡಿ ಅಧಿಕಾರಿಗಳ ಜತೆ ಉತ್ತರ ವಲಯದ ಎಡಿಜಿಪಿ ವಿಕಾಸ ಕುಮಾರ ಸಹ ಸ್ಥಳ ಮಹಜರು ಪಡಿಸಲು ಸಿಐಡಿ ಅಧಿಕಾರಿಗಳೊಂದಿಗೆ ಆಗಮಿಸಿದ್ದರು.

**ಎರಡು ತಂಡಗಳಲ್ಲಿ ಸಿಐಡಿ ತನಿಖೆ:** ಒಂದು ತಂಡ ಕೊಲೆ ನಡೆದ ಸ್ಥಳ ಬಿವಿಬಿ ಕಾಲೇಜು ಆವರಣದಲ್ಲಿ ಪರಿಶೀಲನೆ ನಡೆಸಿದೆ. ಇನ್ನೊಂದು ತಂಡ ಆರೋಪಿ ಊರು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಮುನವಳ್ಳಿ ಗ್ರಾಮಕ್ಕೆ ತೆರಳಿ ಮಾಹಿತಿ ಕಲೆ ಹಾಕಿದೆ.

ಏ.18ರಂದು ಕಾಲೇಜಿಗೆ ಬಂದಿದ್ದ ಫಯಾಜ್ ಬೈಕ್ ಹ್ಯಾಂಡಲ್ ಲಾಕ್ ಮಾಡದೆ, ಕೃತ್ಯ ಮುಗಿಸಿ ಪರಾರಿಯಾಗಲು ಯೋಜಿಸಿದ್ದ. ಬೈಕ್ ನಿಲ್ಲಿಸಿದ್ದ ಸ್ಥಳಕ್ಕೆ ತೆರಳಲು ಸಾಧ್ಯವಾಗದಿದ್ದಾಗ ಕಾಲೇಜಿನ ಮುಖ್ಯದ್ವಾರದ ಮೂಲಕ ಪರಾರಿಯಾಗಲು ಯತ್ನಿಸಿದ್ದ. ಆ ವೇಳೆ ವಿದ್ಯಾರ್ಥಿಗಳು ಹಾಗೂ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾನೆ ಎಂದು ಪೊಲೀಸ್ ವಿಚಾರಣೆ ವೇಳೆ ಬಾಯ್ಬಿಟ್ಟಿರುವುದಾಗಿ ತಿಳಿದುಬಂದಿದೆ. ಈಗಾಗಲೇ ವಿದ್ಯಾನಗರ ಠಾಣೆ ಪೊಲೀಸರು ಶೇ 60ರಷ್ಟು ಪ್ರಕರಣದ ತನಿಖೆ ಪೂರ್ಣಗೊಳಿಸಿದ್ದರು. ಸಾರ್ವಜನಿಕರ ಒತ್ತಡದ ಮೇರೆಗೆ, ಸರಕಾರ ಸೋಮವಾರ ಪ್ರಕರಣದ ತನಿಖೆಯನ್ನು ಸಿಐಡಿಗೆ ಒಪ್ಪಿಸಿದೆ. ಇದೀಗ ಸಿಐಡಿ ಅಧಿಕಾರಿಗಳು, ಪ್ರಾಥಮಿಕ ಹಂತದಿಂದ ತನಿಖೆ ಆರಂಭಿಸಿದ್ದಾರೆ.



ನೇಹಾ ಕೊಲೆ ನಡೆದಿರುವ ಸ್ಥಳವನ್ನು ಮಹಜರು ಪಡಿಸಲು ಆರೋಪಿ ಫಯಾಜ್‌ನನ್ನು ಸಿಐಡಿ ಅಧಿಕಾರಿಗಳು ಬಿವಿಬಿ ಕಾಲೇಜಿಗೆ ಕರೆತಂದರು.

#### ಕೃತ್ಯದ 5 ದಿನದ ಮೊದಲೇ ಚಾಕು ಖರೀದಿ

ನೇಹಾಳನ್ನು ಕೊಲೆ ಮಾಡುವ ಉದ್ದೇಶ ಹೊಂದಿದ್ದ ಆರೋಪಿ ಫಯಾಜ್ 5 ದಿನಗಳ ಮೊದಲೇ ಚಾಕು ಖರೀದಿಸಿದ್ದ. ನೇಹಾ ಜತೆ ಕೆಲ ವಾರಗಳಿಂದ ಸಂಪರ್ಕ ಕಡಿತಗೊಂಡಿದ್ದರಿಂದ ಹತಾಶನಾಗಿ ದ್ವೇಷ ಸಾಧಿಸುತ್ತಿದ್ದ. ಧಾರವಾಡದಲ್ಲಿ ಚಾಕು ಖರೀದಿಸಿ ಬ್ಯಾಗ್‌ನಲ್ಲಿ ಇಟ್ಟುಕೊಂಡು ಕಾಲೇಜಿಗೆ ಬಂದಿದ್ದ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

#### ಸಿಬಿಐಗೆ ತನಿಖೆ ಒಪ್ಪಿಸುವಂತೆ ಎಬಿವಿಪಿ ಪ್ರತಿಭಟನೆ

ಆರೋಪಿ ಫಯಾಜ್‌ನನ್ನು ಸ್ಥಳ ಮಹಜರು ಮಾಡಲು ಸಿಐಡಿ ಅಧಿಕಾರಿಗಳು ಬಿವಿಬಿ ಕಾಲೇಜಿಗೆ ಕರೆದೊಯ್ಯು ವಾಗ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್(ಎಬಿ ವಿಪಿ) ಕಾರ್ಯಕರ್ತರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು. ಫಯಾಜ್‌ನನ್ನು ಕರೆದುಕೊಂಡು ಬಂದ ಕಾರಿಗೆ ಮುತ್ತಿಗೆ ಹಾಕಲು ಯತ್ನಿಸಿದಾಗ, ಪೊಲೀ ಸರು ಕಾರ್ಯಕರ್ತರನ್ನು ತಡೆದರು. ಆ ವೇಳೆ ಪರಸ್ಪರ ವಾಗ್ವಾದ ನಡೆಯಿತು. ನಮ್ಮ ಕಾಲೇಜಿನ ಆವರಣದಲ್ಲಿ ಕೊಲೆ ನಡೆದಿದೆ. ಆರೋಪಿಗೆ ಶಿಕ್ಷೆಯಾಗಬೇಕು. ಪ್ರಕರ ಣದ ತನಿಖೆ ಸಿಬಿಐಗೆ ಒಪ್ಪಿಸಬೇಕು. ಇಲ್ಲದಿದ್ದರೆ, ಆರೋಪಿಯನ್ನು ನಮ್ಮ ಕೈಗೆ ಒಪ್ಪಿಸಿ ಎಂದು ಬಿವಿಬಿ ಕಾಲೇಜಿನ ಎಬಿವಿಪಿ ಕಾರ್ಯಕರ್ತರು ಆಗ್ರಹಿಸಿದರು. ಕಾವ್ಯಾ, ಮೌನೇಶ ಗೌಡ, ರಾಘವೇಂದ್ರ ಪೆದ್ದಾರ, ಶಶಿ, ಸುಪ್ರಿತ್ ಇದ್ದರು.

#### ಸಿಐಡಿ ವಶಕ್ಕೆ ಆರೋಪಿ ಫಯಾಜ್

ನೇಹಾ ಕೊಲೆ ಪ್ರಕರಣದ ತನಿಖೆ ಕೈಗೊಂಡಿರುವ ಸಿಐಡಿ ಅಧಿಕಾರಿಗಳು, ನ್ಯಾಯಾಂಗ ಬಂಧನದಲ್ಲಿದ್ದ ಆರೋಪಿ ಫಯಾಜ್‌ನನ್ನು ಬುಧವಾರ ತಮ್ಮ ವಶಕ್ಕೆ ಪಡೆದಿದ್ದಾರೆ. ಮಂಗಳವಾರದಿಂದ ತನಿಖೆ ಆರಂಭಿಸಿರುವ ಎಸ್ಪಿ ವೆಂಕಟೇಶ್ ನೇತೃತ್ವದ ತಂಡ, ಹೆಚ್ಚಿನ ಮಾಹಿತಿ ಸಂಗ್ರಹಕ್ಕೆ ಆರೋಪಿಯನ್ನು ತಮ್ಮ ವಶಕ್ಕೆ ನೀಡುವಂತೆ ಇಲ್ಲಿನ ಒಂದನೇ ಜೆಎಂಎಫ್‌ಸಿ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಅರ್ಜಿ ಪುರಸ್ಕರಿಸಿದ ನ್ಯಾಯಾಲಯ ಆರು ದಿನ ಆರೋಪಿಯನ್ನು

### ...ಮನೆ ಮನೆ ಪ್ರಚಾರ

← ಮೊದಲಪುಟದಿಂದ

ಸಂಜೆ 6 ಗಂಟೆಯಿಂದಲೇ ಪೊಲೀಸರು ಮತ್ತು ಚುನಾವಣಾ ಸಿಬ್ಬಂದಿ ಆಯಾ ಭಾಗದ ಲಾಡ್ಜ್, ವಸತಿಗೃಹಗಳು, ಪ್ರಮುಖ ಮುಖಂಡರ ಮನೆಗಳಿಗೆ ತೆರಳಿ ಮತದಾರರಲ್ಲದವರು ಕ್ಷೇತ್ರದಲ್ಲಿ ಉಳಿದುಕೊಂಡಿದ್ದಾರೆಯೇ ಎಂಬ ಬಗ್ಗೆ ಪರಿಶೀಲನೆ ಆರಂಭಿಸಿದ್ದಾರೆ. ಕಾಂಗ್ರೆಸ್ ಮತ್ತು ಬಿಜೆಪಿಯ ರಾಷ್ಟ್ರೀಯ ನಾಯಕರು ಮಂಗಳವಾರವೇ ರಾಜ್ಯದಲ್ಲಿ ಚುನಾವಣಾ ಪ್ರಚಾರ ಕೊನೆಗೊಳಿಸಿದ್ದು, ರಾಜ್ಯ ನಾಯಕರು ವಿವಿಧೆಡೆ ಪ್ರಚಾರ ನಡೆಸಿ ಪಕ್ಷದ ಅಭ್ಯರ್ಥಿಗಳ ಪರ ಮತ ಯಾಚಿಸಿದ್ದಾರೆ. ಬಹಿರಂಗ ಪ್ರಚಾರದ ಅಂತಿಮ ದಿನವಾದ ಬಧವಾರ 14 ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ರಾಜ್ಯ ನಾಯಕರು, ಸ್ಥಳೀಯ ಮುಖಂಡರು ಭರ್ಜರಿಯಾಗಿದೆ ಬಹಿರಂಗ ಸಭೆ, ರೋಡ್ ಶೋ, ರ‍್ಯಾಲಿ, ದ್ವಿಚಕ್ರ ವಾಹನ ರ‍್ಯಾಲಿಗಳನ್ನು ಹಮ್ಮಿಕೊಂಡಿದ್ದರು.

#### ಘಟಾನುಘಟಿಗಳ ಪ್ರಚಾರ

**ಬಿಜೆಪಿಯಿಂದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಅಮಿತ್ ಶಾ, ನಿರ್ಮಲಾ ಸೀತಾರಾಮನ್, ಡಾ.ಎಸ್. ಜೈಶಂಕರ್ ಸೇರಿದಂತೆ ಹಲವು ಕೇಂದ್ರ ಸಚಿವರು, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕಾಂಗ್ರೆಸ್‌ನಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ರಣದೀಪ್ ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜೆಡಿಎಸ್‌ನಿಂದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸೇರಿದಂತೆ ಘಟಾನುಘಟಿ ನಾಯಕರು ತಮ್ಮ ಪಕ್ಷಗಳ ಅಭ್ಯರ್ಥಿಗಳ ಪರ ಪ್ರಚಾರದಲ್ಲಿ ತೊಡಗಿದ್ದರು. ಪರಸ್ಪರ ವಾಕ್ಸಮರ ತಾರಕಕ್ಕೇರಿತ್ತು.**

### ನಾಡಗೀತೆ ಧಾಟಿ ಸರಕಾರಕ್ಕೆ ಜಯ

← ಮೊದಲಪುಟದಿಂದ

ನಾಡಗೀತೆಯನ್ನು ಯಾವ ರಾಗದಲ್ಲಿ ಹಾಡಬೇಕು ಎಂಬುದು ಮುಖ್ಯವಲ್ಲ. ಎಲ್ಲ ಸಂಗೀತವೂ ಅತ್ಯುತ್ತಮವಾಗಿದೆ. ಯಾವ ಸಂಗೀತ ಸಂಯೋಜನೆ ಕಡಿಮೆ, ಯಾವುದು ಹೆಚ್ಚು ಎಂದು ಹೇಳುವುದಕ್ಕೆ ಸಾಧ್ಯವಿಲ್ಲ. ಎಲ್ಲವೂ ಅತ್ಯುತ್ತಮ ಸಂಗೀತ ಸಂಯೋಜನೆಗಳಾಗಿವೆ. ಆದ್ದರಿಂದ ಇಂತಹ ರಾಗ ಸಂಯೋಜನೆಯಲ್ಲಿಯೇ ಹಾಡಬೇಕು ಎಂದು ಹೇಳಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ತೀರ್ಪಿನಲ್ಲಿ ಹೇಳಿದೆ.

ಆದರೆ, ಶಾಲಾ ಮಕ್ಕಳ ವಿಚಾರದಲ್ಲಿ ಒಂದೇ ರೀತಿಯಲ್ಲಿ ಇದ್ದರೆ ಉತ್ತಮವಾಗಿರಲಿದೆ. ಏಕೆಂದರೆ ಒಂದೊಂದು ಶಾಲೆಯಲ್ಲಿ ಒಂದೊಂದು ರೀತಿಯ ರಾಗ ಸಂಯೋಜನೆ ಕಲಿಸಿದಲ್ಲಿ ಎಲ್ಲಾ ಮಕ್ಕಳೂ ಒಂದೇ ಕಡೆ ಸೇರಿದಾಗ ಗೊಂದಲಕ್ಕೆ ಕಾರಣವಾಗುತ್ತದೆ. ಅಲ್ಲದೆ, ಕರ್ನಾಟಕ ಶಿಕ್ಷಣದ ಕಾಯಿದೆಯಡಿ ನಾಡಗೀತೆಯನ್ನು ಇಂತಹದ್ದೇ ಧಾಟಿಯಲ್ಲಿ ಹಾಡುವಂತೆ ಆದೇಶ ನೀಡಲು ಅವಕಾಶವಿದೆ. ಈ ಹಿನ್ನೆಲೆಯಲ್ಲಿ ಸರಕಾರ ತನ್ನ ಅಧಿಕಾರ ಬಳಸಿ ಮೈಸೂರು ಅನಂತಸ್ವಾಮಿ ಅವರ ರಾಗ ಸಂಯೋಜನೆಯಂತೆ ನಾಡಗೀತೆ ಹಾಡಲು ಆದೇಶ ನೀಡಿದೆ. ಈ ನಿಟ್ಟಿನಲ್ಲಿ ಸರಕಾರದ ಆದೇಶದಲ್ಲಿ ಯಾವುದೇ ದೋಷ ಕಂಡುಬರುತ್ತಿಲ್ಲ. ಆದ್ದರಿಂದ ಅರ್ಜಿ ವಜಾಗೊಳಿಸಲಾಗುತ್ತಿದೆ ಎಂದು ನ್ಯಾಯಮೂರ್ತಿಗಳು ಅಭಿಪ್ರಾಯಪಟ್ಟಿದ್ದಾರೆ. ನಾಡಗೀತೆಯನ್ನು ಮೈಸೂರು ಅನಂತಸ್ವಾಮಿ ಅವರು ಸಂಯೋಜಿಸಿದ ರಾಗದಲ್ಲಿ ಹಾಡುವಂತೆ ಸೂಚಿಸಿ ಸರಕಾರ ಆದೇಶ ಹೊರಡಿಸಿತ್ತು. ಇದನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದ ಕಿಕ್ಕೇರಿ ಕೃಷ್ಣಮೂರ್ತಿ, ಮೈಸೂರು ಅನಂತಸ್ವಾಮಿ ಅವರು ನಾಡಗೀತೆಯ ಒಂದು ಪಲ್ಲವಿ, ಎರಡು ಚರಣಗಳಿಗೆ ಮಾತ್ರ ಸ್ವರ ಸಂಯೋಜನೆ ಮಾಡಿದ್ದು, ಪೂರ್ಣ ಪಾಠಕ್ಕೆ ಮಾಡಿಲ್ಲ. ಆದರೆ, ಸಿ.ಅಶ್ವತ್ಥ್ ಅವರು ಪೂರ್ಣ ಪಾಠಕ್ಕೆ ಸ್ವರ ಸಂಯೋಜನೆ ಮಾಡಿದ್ದಾರೆ. ಆದ್ದರಿಂದ ಸಿ.ಅಶ್ವತ್ಥ್ ರಾಗ ಸಂಯೋಜಿಸಿದ ದಾಟಿಯಲ್ಲಿ ನಾಡಗೀತೆ ಹಾಡಲು ಆದೇಶಿಸುವಂತೆ ಸರಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿದ್ದರು. ಇದೀಗ ಈ ಅರ್ಜಿ ವಜಾಗೊಂಡಿದೆ.

### ....ಚುನಾವಣೆಗಳ ನಿಯಂತ್ರಣ ಮಾಡಲ್ಲ!

← ಮೊದಲಪುಟದಿಂದ

ಎಡಿಆರ್ ಪರವಾಗಿ ವಾದ ಮಂಡಿಸಿದ ವಕೀಲ, ಪ್ರಶಾಂತ್ ಭೂಷಣ್ ಅವರ ಕಳವಳಗಳಿಗೆ ಪ್ರತಿಕ್ರಿಯೆ ನೀಡಿದ ಕೋರ್ಟ್, ನಿಮ್ಮ ಅನುಮಾ ನಗಳಿಗೆ ನಾವು ಸಹಾಯ ಮಾಡಲು ಆಗುವುದಿಲ್ಲ. ನಿಮ್ಮ ಆಲೋಚನಾ ಪ್ರಕ್ರಿಯೆಯನ್ನು ಬದಲಿಸಲು ನಾವು ಇಲ್ಲಿಲ್ಲ ಎಂದು ಖಡಕ್ಕಾಗಿ ಹೇಳಿತು. ಬುಧವಾರ ಬೆಳಗ್ಗೆ ವಿಚಾರಣೆ ಆರಂಭವಾಗುತ್ತಿದ್ದಂತೆ ಕೋರ್ಟ್, ಇವಿಎಂಗಳ ಮೈಕ್ರೋ ಕಂಟ್ರೋಲರ್‌ಗಳು ಮತ್ತು ಅವುಗಳನ್ನು ಮರು ಪ್ರೋಗ್ರಾಮ್ ಮಾಡಬಹುದೇ ಎಂದು ಸ್ಪಷ್ಟನೆ ಕೋರಿತು. ಅಲ್ಲದೆ, ಮಧ್ಯಾಹ್ನ ಖುದ್ದು ಆಯೋಗದ ಅಧಿಕಾರಿಗಳೇ ಹಾಜರಾಗಿ ಮಾಹಿತಿ ನೀಡುವಂತೆ ಸೂಚಿಸಿತು. ಇದಕ್ಕೆ ಉತ್ತರಿಸಿದ ಆಯೋಗ ಎಲ್ಲ ಮೂರು ಘಟಕಗಳು ತಮ್ಮದೇ ಆದ ಮೈಕ್ರೋ ಕಂಟ್ರೋಲರ್‌ಗಳನ್ನು ಹೊಂದಿದ್ದು ಒಮ್ಮೆ ಮಾತ್ರ ಪ್ರೋಗ್ರಾಮ್ ಮಾಡಬಹುದು ಎಂದಿತು. ಆದರೆ, ಮರು ಪ್ರೋಗ್ರಾಮ್ ಮಾಡಬಹುದು ಎಂದು ಭೂಷಣ್ ವಾದಿಸಿದರು. ಆದರೆ ಕೋರ್ಟ್, ಆಯೋಗದ ತಾಂತ್ರಿಕ ವರದಿಯನ್ನು ನಂಬಬೇಕು ಎಂದು ಅರ್ಜಿದಾರರಿಗೆ ಸೂಚಿಸಿದರು.



ಈ ವೇಳೆ ನಿಮ್ಮ ಅನುಮಾನದ ಮೇಲೆ ನಾವು ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ. ಆಯೋಗ ಒಂದು ಸಾಂವಿಧಾನಿಕ ಪ್ರಾಧಿಕಾರವಾಗಿದ್ದು, ಅದನ್ನು ಅಥವಾ ಚುನಾವಣೆಗಳನ್ನು ನಿಯಂತ್ರಿಸಲು ಸಾಧ್ಯವಿಲ್ಲ ಎಂದಿತು.